ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2306
ಮಾನ್ಯ ಸದಸ್ಯರ ಹೆಸರು	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು	ಉನ್ನತ ಶಿಕ್ಷಣ ಸಚಿವರು
ಉತ್ತರಿಸಬೇಕಾದ ದಿನಾಂಕ	21.03.2022

	ಪ್ರಶ್ನೆ	ಉತ್ತರ
(ಅ)	ಕಲ್ಬುರ್ಗಿ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಯಾವ ಯಾವ ಕೋರ್ಸ್‌ಗಳಿಗೆ ಅವಕಾಶ ನೀಡಲಾಗಿದೆ;	ಕಲ್ಬುರ್ಗಿ ಕೇಂದ್ರೀಯ ವಿಶ್ವವಿದ್ಯಾಲಯವು ಕೇಂದ್ರ ಸರ್ಕಾರದ ಶಾಸನದ ಮೂಲಕ ರಚಿಸಲ್ಪಟ್ಟ ವಿಶ್ವವಿದ್ಯಾಲಯವಾಗಿದ್ದು, ಈ ಕೇಂದ್ರ ವಿಶ್ವವಿದ್ಯಾಲಯವು ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯದ ಹಾಗೂ ವಿಶ್ವವಿದ್ಯಾಲಯದ ಧನ ಸಹಾಯ ಆಯೋಗದ ನೇರ ನಿಯಂತ್ರಣಕ್ಕೆ ಒಳಪಡುತ್ತದೆ.
(ಆ)	ಈ ವಿಶ್ವವಿದ್ಯಾಲಯದಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿಗಳ ಹಾಗೂ ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ವೃಂದವಾರು ಮಾಹಿತಿ ಒದಗಿಸುವುದು)	
(ಇ)	ಖಾಲಿ ಇರುವ ಹುದ್ದೆಗಳಿಗೆ ಹೊರ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆಯೇ; ಮಾಡಿಕೊಂಡಿದ್ದಲ್ಲಿ, ಅವರುಗಳ ಸಂಖ್ಯೆ ಎಷ್ಟು; ಇವರುಗಳನ್ನು ಯಾವ ನಿಯಮದ ಅಡಿಯಲ್ಲಿ ನೇಮಕ ಮಾಡಲಾಗಿದೆ;	ಕಲಬುರಗಿಯಲ್ಲಿನ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಸಿಬ್ಬಂದಿ ನೇಮಕಾತಿ, ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಪ್ರಕಾರ್ಯಗಳ ಮೇಲೆ ರಾಜ್ಯ ಸರ್ಕಾರವು ಯಾವುದೇ ಅಧಿಕಾರ ವ್ಯಾಪ್ತಿ ಹೊಂದಿರುವುದಿಲ್ಲ.
(ಈ)	ಕಲ್ಬುರ್ಗಿ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಅದಕ್ಕಾಗಿ ಬಂದ ಅನುದಾನ ಎಷ್ಟು; ಖರ್ಚಾದ ಅನುದಾನ ಎಷ್ಟು? (ಕಳೆದ 3 ವರ್ಷದ ಮಾಹಿತಿ ನೀಡುವುದು)	ಅನ್ವಯಿಸುವುದಿಲ್ಲ

ಸಂಖ್ಯೆ: ಇಡಿ 95 ಯುಎನ್‌ಇ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು